# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತೆಂಗಿನ ನಾರಿನ ವಲಯಕ್ಕೆ ನೀಡುತ್ತಿರುವ ಮಾರುಕಟ್ಟೆ ಅಭಿವೃದ್ಧಿ ಸಹಾಯಧನ ಯೋಜನೆ ಕಾರ್ಯಕ್ರಮಗಳಿಗೆ ಮಾರ್ಗಸೂಚಿಗಳನ್ನು ಮರುರೂಪಿಸುವ ಕುರಿತು.

ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ [illegible]
ಕ್ರಮಾಂಕ 6848
03 SEP 2016
[illegible] ಕಛೇರಿ, ಬೆಂಗಳೂರು

ಓದಲಾಗಿದೆ: ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರ ಪತ್ರ ಸಂಖ್ಯೆ: ಕೈವಾಇ/ವಿಶ್ವ/ಎ2/ತೆನಾನೆ/ಮಾಸೂ/2016–17/16, ದಿನಾಂಕ: 15.06.2016 ಮತ್ತು 06.07.2016.

ಪ್ರಸ್ತಾವನೆ:

*****

ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿ ನಿ., ಮತ್ತು ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮಗಳಿಗೆ ಮಾರುಕಟ್ಟೆ ಅಭಿವೃದ್ಧಿ ಸಹಾಯಧನ ಯೋಜನೆಯಡಿ ಸಂಸ್ಥೆಗಳ ಒಟ್ಟು ವಹಿವಾಟಿನ ಮೇಲೆ ಉತ್ತೇಜನ ಧನವಾಗಿ ಶೇ. 10 ರಷ್ಟು ಅನುದಾನವನ್ನು ನೀಡಲಾಗುತ್ತಿದ್ದು, ಇದರಲ್ಲಿ ಶೇ. 5 ರಷ್ಟು ಅನುದಾನವನ್ನು ಕೇಂದ್ರ ಸರ್ಕಾರವು ಹಾಗೂ ಶೇ. 5 ರಷ್ಟು ಅನುದಾನವನ್ನು ರಾಜ್ಯ ಸರ್ಕಾರವು ನೀಡುತ್ತಿದ್ದು, ಮೇಲೆ ಓದಲಾದ ಪತ್ರದಲ್ಲಿ ಆಯುಕ್ತರು, ಕೈಗಾರಿಕಾಭಿವೃದ್ಧಿ ಮತ್ತು ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಇವರು ಮಾರ್ಗಸೂಚಿಗಳನ್ನು ಸರ್ಕಾರದ ಅನುಮೋದನೆಗಾಗಿ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಮುಂದಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಿಐ 112 ಸಿಎಸ್‌ಸಿ 2016 (ಭಾಗ–2), ಬೆಂಗಳೂರು, ದಿನಾಂಕ: 30.08.2016**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳನ್ವಯ, ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿ ನಿ., ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ, ಹಾಗೂ ತೆಂಗಿನ ನಾರಿನ ಪ್ರಾಥಮಿಕ ಸಹಕಾರ ಸಂಘಗಳು ಈ ಮಾರುಕಟ್ಟೆ ಅಭಿವೃದ್ಧಿ ಸಹಾಯಧನ ಯೋಜನೆಯಡಿ ಸಂಸ್ಥೆಗಳ ಹಿಂದಿನ ಮೂರು ವರ್ಷಗಳ ಸರಾಸರಿ ವಾರ್ಷಿಕ ವಹಿವಾಟಿನ ಮೇಲೆ ಉತ್ತೇಜನ ಧನವಾಗಿ ಶೇ. 10 ರಷ್ಟು ಅನುದಾನವನ್ನು ನೀಡಲಾಗುತ್ತಿದ್ದು, ಇದರಲ್ಲಿ ಶೇ. 5 ರಷ್ಟು ಅನುದಾನವನ್ನು ಕೇಂದ್ರ ಸರ್ಕಾರವು ಹಾಗೂ ಶೇ. 5 ರಷ್ಟು ಅನುದಾನವನ್ನು ರಾಜ್ಯ ಸರ್ಕಾರವು ನೀಡುತ್ತಿರುತ್ತವೆ. ರಾಜ್ಯ ಸರ್ಕಾರದಿಂದ "ಮಾರುಕಟ್ಟೆ ಅಭಿವೃದ್ಧಿ ಯೋಜನೆ"ಯ ಲೆಕ್ಕಶೀರ್ಷಿಕೆ 2851–00–106–0–11, (059) ಇತರೆ ವೆಚ್ಚಗಳು ಅಡಿಯಲ್ಲಿ ನೀಡುವ ಅನುದಾನಕ್ಕೆ ಮತ್ತು ಅದರ ಸದ್ಬಳಕೆಗೆ ಈ ಆದೇಶದಲ್ಲಿ ಮರು ರೂಪಿಸಿದ ಮಾರ್ಗಸೂಚಿಗಳಿಗೆ ಅನುಮೋದನೆ ನೀಡಲಾಗಿದೆ.

ಈ ಯೋಜನೆಯ ಅನುಷ್ಠಾನವನ್ನು ಈ ಆದೇಶದಲ್ಲಿ ಅನುಮೋದಿಸಲಾಗಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸತಕ್ಕದ್ದು.

**ಯೋಜನೆಯ ಹೆಸರು** : ತೆಂಗಿನ ನಾರಿನ ಸಹಕಾರಿ ಸಂಘಗಳಿಗೆ ರಿಯಾಯಿತಿ ಬದಲಾಗಿ ಮಾರುಕಟ್ಟೆ ಅಭಿವೃದ್ಧಿ ಸಹಾಯಧನ

**ಲೆಕ್ಕಶೀರ್ಷಿಕೆ** : 2851–00–106–0–11 (059) ಇತರೆ ವೆಚ್ಚಗಳು

**ಹಿನ್ನೆಲೆ:**

ಕೇಂದ್ರ ತೆಂಗಿನ ನಾರಿನ ಮಂಡಳಿಯು 2000–01ನೇ ಸಾಲಿನಲ್ಲಿ ಗ್ರಾಹಕರಿಗೆ ತೆಂಗಿನ ನಾರಿನ ವಸ್ತುಗಳ ಖರೀದಿ ಮೇಲೆ ನೀಡುತ್ತಿದ್ದ ರಿಯಾಯಿತಿ ಯೋಜನೆಯ ಬದಲಾಗಿ ಮಾರುಕಟ್ಟೆ ಅಭಿವೃದ್ಧಿ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಅದರಂತೆ, ಪ್ರಾಥಮಿಕ ಸಂಸ್ಥೆಗಳು ಹಾಗೂ ನಿಗಮ / ಮಂಡಳಿಗಳು ಹಿಂದಿನ 3 ವರ್ಷಗಳಲ್ಲಿ ನಡೆಸಿದ ವಹಿವಾಟಿನ ಸರಾಸರಿಯಲ್ಲಿ ಶೇ. 10 ರಷ್ಟು ಮಾರುಕಟ್ಟೆ ಅಭಿವೃದ್ಧಿ ಸಹಾಯಧನವನ್ನು ನೀಡಲಾಗುತ್ತಿದ್ದು, ಇದರಲ್ಲಿ ರಾಜ್ಯ ಸರ್ಕಾರವು ಶೇ. 5 ರಷ್ಟನ್ನು ಹಾಗೂ ಕೇಂದ್ರ ಸರ್ಕಾರವು ಶೇ. 5 ರಷ್ಟು ಸಹಾಯಧನವನ್ನು ಮಂಜೂರು ಮಾಡಲು ಅವಕಾಶವಿರುತ್ತದೆ.

**ಯೋಜನೆಯ ಚೌಕಟ್ಟಿನ ಅಂಶಗಳು:**

1) ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿ ಮತ್ತು ತೆಂಗಿನ ನಾರಿನ ಉತ್ಪಾದಕರ ಪ್ರಾಥಮಿಕ ಸಹಕಾರ ಸಂಘಗಳು ಹಾಗೂ ನಿಗಮ / ಮಂಡಳಿಯವರ ಹಿಂದಿನ 3 ವರ್ಷಗಳಲ್ಲಿ ನಡೆಸಿದ ವಹಿವಾಟಿನ ಸರಾಸರಿಯಲಿ ಶೇ. 10 ರಷ್ಟು ಮಾರುಕಟ್ಟೆ ಅಭಿವೃದ್ಧಿ ಸಹಾಯಧನವನ್ನು ನೀಡಲಾಗುವುದು. ಇದರಲ್ಲಿ ಶೇ. 5 ರಷ್ಟನ್ನು ರಾಜ್ಯ ಸರ್ಕಾರ ಭರಿಸುವುದು. ಉಳಿದ ಶೇ. 5 ರಷ್ಟನ್ನು ಕೇಂದ್ರ ಸರ್ಕಾರವು ನೀಡುವುದು.

2) ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿ ಮತ್ತು ತೆಂಗಿನ ನಾರಿನ ಉತ್ಪಾದಕರ ಪ್ರಾಥಮಿಕ ಸಹಕಾರ ಸಂಘಗಳು ಈ ಮಾರುಕಟ್ಟೆ ಅಭಿವೃದ್ಧಿ ಸಹಾಯಧನವನ್ನು ಪಡೆಯಲು ಅರ್ಹವಾಗಿರುತ್ತವೆ.

3) ಪ್ರಾಥಮಿಕ ಸಹಕಾರ ಸಂಘಗಳು ಉತ್ಪಾದಿಸಿದ ಕಾಯರ್ ಫೈಬರ್ ಹಾಗೂ ಕಾಯರ್ ಯಾರ್ನ್‌ನ್ನು ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿಯವರಿಗೆ ಮಾರಾಟ ಮಾಡಿರುವುದಕ್ಕೆ ತೆಂಗಿನ ನಾರಿನ ಉತ್ಪಾದಕರ ಪ್ರಾಥಮಿಕ ಸಹಕಾರ ಸಂಘಗಳು ಮಾರುಕಟ್ಟೆ ಅಭಿವೃದ್ಧಿ ಸಹಾಯಧನ ಪಡೆಯಲು ಅರ್ಹವಿರುತ್ತದೆ. ಆದರೆ, ಈ ರೀತಿ ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಳಿಯವರು ಖರೀದಿ ಮಾಡಿದ ಕಾಯರ್ ಫೈಬರ್, ಕಾಯರ್ ಯಾರ್ನ್‌ನ ಪ್ರಮಾಣಕ್ಕೆ ಮಾರುಕಟ್ಟೆ ಅಭಿವೃದ್ಧಿ ಸಹಾಯಧನ ಪಡೆಯಲು ಅರ್ಹರಿರುವುದಿಲ್ಲ.

4) "ಮಾರುಕಟ್ಟೆ ಅಭಿವೃದ್ಧಿ ಸಹಾಯಧನ"ವನ್ನು ಬಳಕೆ ಮಾಡಬಹುದಾದ ಚಟುವಟಿಕೆಗಳು:

- ತೆಂಗಿನ ನಾರು ಉತ್ಪನ್ನಗಳ ಪ್ರಚಾರ.
- ನೂತನ ಮಾರಾಟ ಮಳಿಗೆ ಸ್ಥಾಪಿಸಲು.
- ಅಸ್ಥಿತ್ವದಲ್ಲಿರುವ ಮಾರಾಟ ಮಳಿಗೆಗಳ ನವೀಕರಣ.
- ಮಾರುಕಟ್ಟೆ ಅಧ್ಯಯನ.
- ತೆಂಗಿನ ನಾರಿನ ಉತ್ಪನ್ನಗಳ ಉನ್ನತೀಕರಣ.
- ದಾಸ್ತಾನು ಮಳಿಗೆಗಳ ನಿರ್ಮಾಣ ಮತ್ತು ನಿರ್ವಹಣೆ.
- ನವೀನ ಮಾರಾಟ ತಂತ್ರಗಾರಿಕೆ.

**ಯೋಜನೆಯ ಮಾರ್ಗಸೂಚಿಗಳು:**

ಈ ಯೋಜನೆಯ ಅಡಿಯಲ್ಲಿ ಅನುದಾನ ಬೇಡಿಕೆಯನ್ನು ಮತ್ತು ಅನುದಾನದ ಮೊತ್ತವನ್ನು ನಿಗಧಿ ಪಡಿಸುವ ಕುರಿತು ಭಾರತ ಸರ್ಕಾರದ ತೆಂಗಿನ ನಾರಿನ ಮಂಡಳಿಯು ನಿಗಧಿ ಪಡಿಸಿರುವ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಈ ಯೋಜನೆಯ ಮಾರ್ಗಸೂಚಿ ಕುರಿತಂತೆ ಹಿಂದೆ ಸರ್ಕಾರದಿಂದ ಹೊರಡಿಸಲಾಗಿರುವ ಎಲ್ಲಾ ಆದೇಶಗಳನ್ನು ರದ್ದುಪಡಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 310 ವೆಚ್ಚ–1/2016, ದಿನಾಂಕ: 27.08.2016 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 29 ಎಫ್‌ಆರ್‌ಓ 2016, ದಿನಾಂಕ: 10.08.2016 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
30.08.2016
[ಎಲ್.ಎಸ್. ಶ್ರೀಕಂಠಬಾಬು]
ಸರ್ಕಾರದ ಅಧೀನ ಕಾರ್ಯದರ್ಶಿ [ಸಪ್ರಕೈ],
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:

**ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ ಕಳುಹಿಸಲಾಗಿದೆ. ತದನಂತರ, ಪ್ರಕಟಗೊಂಡ ಸಂಚಿಕೆಗಳ 25 ಪ್ರತಿಗಳನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲಾಗಿದೆ.**

ಪ್ರತಿಯನ್ನು:

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್‌ಎಸ್‌ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
2) ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನ', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001.
3) ಪ್ರಧಾನ ಮಹಾಲೇಖಪಾಲರು (ಎ &ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4) ಆಯುಕ್ತರು, ಕೈಗಾರಿಕಾಭಿವೃದ್ಧಿ ಹಾಗೂ ನಿರ್ದೇಶಕರು, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು–1.
5) ಆಂತರಿಕ ಆರ್ಥಿಕ ಸಲಹೆಗಾರರು ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಅಭಿವೃದ್ಧಿ ನಿಗಮ, ವಿ.ಐ.ಟಿ.ಸಿ. ಕಟ್ಟಡ, ಕಸ್ತೂರ್ ಬಾ ರಸ್ತೆ, ಬೆಂಗಳೂರು.
7) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ತೆಂಗಿನ ನಾರಿನ ಸಹಕಾರ ಮಹಾಮಂಡಲ (ನಿ), ನಂ. 953(ಎ), 2ನೇ ಮುಖ್ಯರಸ್ತೆ, 4ನೇ ಬ್ಲಾಕ್, ರಾಜಾಜಿನಗರ, ಬೆಂಗಳೂರು–10.
8) ಕಾರ್ಯದರ್ಶಿಗಳು, ಸಂಬಂಧಪಟ್ಟ ಪ್ರಾಥಮಿಕ ತೆಂಗಿನ ನಾರಿನ ಸಹಕಾರ ಸಂಘಗಳು (ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಮೂಲಕ).
9) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ–1), ವಿಧಾನಸೌಧ, ಬೆಂಗಳೂರು.
10) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು.
11) ಸರ್ಕಾರದ ಅಧೀನ ಕಾರ್ಯದರ್ಶಿ [ಸಮನ್ವಯ], ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸಸೌಧ, ಬೆಂಗಳೂರು–1 (ಮಲ್ಟಿಗ್ರಾಫ್ ಹಾಗೂ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಿಗೆ ಕಳುಹಿಸುವ ಸಲುವಾಗಿ)
12) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.